ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ರಾಜ್ಯದೆಲ್ಲೆಡೆ ಚಿಕ್ಕಮಕ್ಕಳನ್ನು ಭಿಕ್ಷಾಟನೆಗೆ ಬಳಸಿಕೊಳ್ಳುತ್ತಿರುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

18 (49) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ದೇವಸ್ಥಾನಗಳ ಸುತ್ತಮುತ್ತ, ರೈಲು ನಿಲ್ದಾಣ, ಬಸ್ಸು ನಿಲ್ದಾಣಗಳ ಹತ್ತಿರ ಹಾಗೂ ನಗರದ ಸಿಗ್ನಲ್‌ಗಳ ಬಳಿ ಹಲವಾರು ಚಿಕ್ಕ ಮಕ್ಕಳ ಹಾಗೂ ಮಕ್ಕಳನ್ನು ಮಡಿಲಲ್ಲಿ ಇಟ್ಟುಕೊಂಡು ಭಿಕ್ಷಾಟನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಚಿಕ್ಕ ಮಕ್ಕಳಿಗೆ ಮತ್ತು ಬರಿಸುವ ಔಷಧ ನೀಡಿ, ನಿದ್ರಿಸುವಂತೆ ಮಾಡಿ ಅವುಗಳನ್ನು ತೋರಿಸಿ, ಕರುಣೆ ಬರುವಂತೆ ಮಾಡಿ ಭಿಕ್ಷಾಟನೆ ನಡೆಸುತ್ತಾ ಮಕ್ಕಳ ಜೀವನದ ಜೊತೆ ಆಟವಾಡುವವರ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಇಲ್ಲಿಯವರೆಗೆ ಇಂತಹ ಎಷ್ಟು ಮಕ್ಕಳನ್ನು ರಕ್ಷಿಸಲಾಗಿದೆ? (ಸಂಪೂರ್ಣ ವಿವರ ನೀಡುವುದು)